370 (616) ಶ್ರೀ ಶ್ರೀರಾಮರೆಡ್ಡಿ.ಜಿ.ವಿ. ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ: ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಗೆ ನೀಡುತ್ತಿರುವ ಅನುದಾನ ಕ್ರಮೇಣ ಕಡಿಮೆಯಾಗಿ, ಸಣ್ಣ ನೀರಾವರಿಯ ಕೆರೆಗಳು ಅಭಿವೃದ್ಧಿ ಕಾಣದೆ ಶಿಥಿಲ ಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ರಾಜ್ಯದಲ್ಲಿನ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಅವಶ್ಯಕತೆಗೆ ತಕ್ಕಂತೆ ಅನುದಾನ ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ರೈತಕಾಯಕ ಕೆರೆ ಯೋಜನೆಯಡಿಯಲ್ಲಿ ಒಟ್ಟು 187 ಕೆರೆಗಳ ಪುನರುಜ್ಜೀವನ ಕಾರ್ಯವನ್ನು ರೂ.30.79 ಕೋಟಿ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗಿದೆ. ಈ ಪೈಕಿ 179 ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿವೆ; ಇವುಗಳಿಗೆ 21.43 ಕೋಟಿ ರೂ.ಗಳು ವೆಚ್ಚ ಮಾಡಲಾಗಿದೆ. 10.00 ಕೋಟಿ ರೂ.ಗಳ ಬಿಲ್ಲು ಬಾಕಿ ಇರುತ್ತದೆ. ವಿಶ್ವ ಬ್ಯಾಂಕಿನಿಂದ ಸಾಲವನ್ನು ಪಡೆದು ಜಲಸಂವರ್ಧನೆ ಯೋಜನಾ ಸಂಘ ಇದೆ ಮೂಲಕ ರಾಜ್ಯದಲ್ಲಿ ಒಟ್ಟು 2005 ಕೆರೆಗಳ ಪುನರುಜ್ಜೀವನ ಕೆಲಸವನ್ನು 670 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಈ ಕಾರ್ಯಕ್ರಮವು 2008ರೊಳಗೆ ಪೂರ್ಣಗೊಳ್ಳುವುದು. ನಬಾರ್ಡ್ ಯೋಜನೆಯಡಿಯಲ್ಲಿ 70 ಕೆರೆಗಳ ಕಾಮಗಾರಿಗಳ ಅಭಿವೃದ್ಧಿ ಕಾರ್ಯವನ್ನು ರೂ.35.70 ಕೋಟಿ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗಿದೆ. ಈ ಪೈಕಿ 34 ಕಾಮಗಾರಿಗಳು ಪೂರ್ಣಗೊಂಡಿವೆ. ಬರಪರಿಹಾರದ ಕೂಲಿಗಾಗಿ ಕಾಳು ಯೋಜನೆಯ ಅಡಿಯಲ್ಲಿ ಸಣ್ಣನೀರಾವರಿ ಕೆರೆಗಳ ಅಭಿವೃದ್ಧಿ ಕಾರ್ಯವನ್ನು ರೂ.20 ಕೋಟಿ ಅಂದಾಜು ವೆಚ್ಚದಲ್ಲಿ (ಆಹಾರ ಧಾನ್ಯದ ಮೌಲ್ಯವೂ ಸೇರಿ) ಕೈಗೊಳ್ಳಲಾಗಿದೆ.

371 (620) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ): ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕನಿಷ್ಟ ಸಾರಿಗೆ ಸಂಪರ್ಕವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಗ್ರಾಮೀಣ ಪ್ರದೇಶಗಳಲ್ಲಿ ಸಾರಿಗೆ ಸಂಪರ್ಕ ಉತ್ತಮಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮ ಯಾವುವು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಬಂದಿಲ್ಲ.

ಆ) ರಾಷ್ಟ್ರೀಕೃತ ವಲಯದಲ್ಲಿರುವ ರಸ್ತೆ ಸಂಪರ್ಕವಿರುವ ಎಲ್ಲಾ ಗ್ರಾಮಗಳಿಗೂ ಸಮರ್ಪಕ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ. ಇದಲ್ಲದೆ, ಹಾಲಿ ಕಾರ್ಯಾಚರಣೆ ಮಾಡುತ್ತಿರುವ ಬಸ್ಸುಗಳ ಜೊತೆಗೆ ಗ್ರಾಮೀಣ ಪ್ರದೇಶದ ಪ್ರಯಾಣಿಕರ ಅನುಕೂಲಕ್ಕಾಗಿ ಮಿನಿ ಬಸ್ಸುಗಳನ್ನು ಮತ್ತು ಎರಡು ಬಾಗಿಲುಳ್ಳ ಗ್ರಾಮೀಣ ಸಾರಿಗೆ ಬಸ್ಸುಗಳನ್ನು ಪ್ರಾರಂಭಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಗ್ರಾಮಾಂತರ ಪ್ರದೇಶದಲ್ಲಿ ಕಡಿಮೆ ಅಂತರ ಪ್ರಯಾಣ ಮಾಡುವ ಪ್ರಯಾಣಿಕರಿಗೆ ಇಳಿಸಿದ ದರಗಳ ಸೌಲಭ್ಯ ಒದಗಿಸಲು ಉಪಹಂತ ಪದ್ಧತಿಯನ್ನೂ ಜಾರಿಗೆ ತರಲಾಗಿದೆ.